ಕಟ್ಟಡಗಳನ್ನು ಕೊಡಲಿ. ಮಾನ್ಯ ಮುಖ್ಯಮಂತ್ರಿಯವರು ಇದರ ಬಗ್ಗೆ ತೀರ್ಮಾನ ಮಾಡಿ ಹೇಳಲಿ. ಮಾನ್ಯ ಮುಖ್ಯಮಂತ್ರಿಯವರು ಇದರ ಬಗ್ಗೆ ಏನೂ ಹೇಳುತ್ತಿಲ್ಲ. ತಾವೂ ಇದರ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳು ಮಾತನಾಡಬೇಕು ಎಂದು ಹೇಳುತ್ತಿದ್ದೀರಿ.

(ಗೊಂದಲ)

ಶ್ರೀ ಕೆ.ಎಸ್. ಪುಟ್ಟಣ್ಣಯ್ಯ : ಮಾನ್ಯ ಮುಖ್ಯಮಂತ್ರಿಯವರು ಇದರ ಬಗ್ಗೆ ಮಾತನಾಡಬೇಕು. ಅದು ತುಂಬಾ ಬಡ ಮಕ್ಕಳಿಗೆ ಇರುವುದು. ಬಡ ಮಕ್ಕಳ ಬಗ್ಗೆ ಯೋಚನೆ ಮಾಡಬೇಕು.

(ಗೊಂದಲ)

ಅಧ್ಯಕ್ಷರು : ಹೌದು ನಾನೂ ಕೂಡ ಬಡವರ ಮಕ್ಕಳು.

ಶ್ರೀ ಕೆ.ಎಸ್. ಪುಟ್ಟಣ್ಣಯ್ಯ : ಮಾನ್ಯ ಅಧ್ಯಕ್ಷರೆ, ಹಳೆಮಕ್ಕಳು, ಹೊಸ ಮಕ್ಕಳು ಎಂದು ಇಲ್ಲ. ಎಲ್ಲಾ ಒಂದೇ ರೀತಿಯ ಮಕ್ಕಳು.

(ಗೊಂದಲ)

ಅಧ್ಯಕ್ಷರು : ನಿಮಗೆ ಗೊತ್ತಿಲ್ಲ. ನಾನು ನೋಡಿದ್ದೇನೆ. ಅಲ್ಲಿಗೆ ಬರುವ ಮಕ್ಕಳೆಲ್ಲಾ ಒಂದೇ ರೀತಿಯ dress ಹಾಕಿಕೊಂಡಿರುತ್ತಾರೆ.

(ಗೊಂದಲ)

ಶ್ರೀ ಕೆ.ಎಸ್. ಪುಟ್ಟಣ್ಣಯ್ಯ : ಇಲ್ಲ ಸಾರ್. ಅಂಗನವಾಡಿಯಲ್ಲಿ ಹಿಂದೆ ಯಾವ ರೀತಿ dress ಇತ್ತು. ಇದೇ ರೀತಿ ಇದೆ. ನಾನು ನಮ್ಮ ಹಳ್ಳಿಯಲ್ಲಿ ನೋಡಿದ್ದೇನೆ. ಮಾನ್ಯ ಮುಖ್ಯಮಂತ್ರಿಯವರು ಇದರ ಬಗ್ಗೆ ಮಾತನಾಡಬೇಕು. ಇದು ಬಹಳ ಮುಖ್ಯವಾದದ್ದು.

(ಗೊಂದಲ)

ಶ್ರೀ ಸಿದ್ದರಾಮಯ್ಯ : ಪರಿಶೀಲನೆ ಮಾಡಿ ಏನು ಕ್ರಮವನ್ನು ತೆಗೆದುಕೊಳ್ಳಬೇಕೋ ಅದನ್ನು ತೆಗೆದುಕೊಳ್ಳುತ್ತೇನೆ.

ಅಧ್ಯಕ್ಷರು : ಮಾನ್ಯ ಮಂಕಾಳ ಸುಬ್ಬ ವೈದ್ಯರವರು ಮಾತನಾಡುವುದು.

ಮಕ್ಕಳ ಶಿಕ್ಷಣ ಕಾಯ್ದೆಯಡಿ ಪ್ರವೇಶ

42(325) ಶ್ರೀ ಮಂಕಾಳ ಸುಬ್ಬ ವೈದ್ಯ (ಭಟ್ಕಳ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿರುವ ಅನುದಾನರಹಿತ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು;

(ಆ) 2014–15ನೇ ಸಾಲಿನಲ್ಲಿ ಎಷ್ಟು ವಿದ್ಯಾರ್ಥಿಗಳು ಅನುದಾನರಹಿತ ಶಾಲೆಗಳಲ್ಲಿ 1ನೇ ತರಗತಿಗೆ ದಾಖಲಾಗಿರುತ್ತಾರೆ ;

(ಇ) ಈ ಪೈಕಿ ಎಷ್ಟು ವಿದ್ಯಾರ್ಥಿಗಳನ್ನು ಶಿಕ್ಷಣ ಹಕ್ಕು ಕಾಯಿದೆಯಡಿ ಪ್ರವೇಶ ನೀಡಲಾಗಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

ಶ್ರೀ ಕಿಮ್ಮನೆ ರತ್ನಾಕರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :–

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿರುವ ಅನುದಾನರಹಿತ ಪ್ರಾಥಮಿಕ ಶಾಲೆಗಳ ಸಂಖ್ಯೆ–108

(ಆ) 2014–15ನೇ ಸಾಲಿನಲ್ಲಿ ಅನುದಾನರಹಿತ ಶಾಲೆಗಳಲ್ಲಿ 1ನೇ ತರಗತಿಗೆ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ–4750

(ಇ) ಶಿಕ್ಷಣ ಹಕ್ಕು ಕಾಯ್ದೆಯಡಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ತಾಲ್ಲೂಕುವಾರು ವಿವರ ಕೆಳಕಂಡಂತಿದೆ :

ಕಾರವಾರ	140
ಅಂಕೋಲಾ	73
ಕುಮಟಾ	62
ಹೊನ್ನಾವರ	85
ಭಟ್ಕಳ	131
ಶಿರಸಿ	103
ಸಿದ್ದಾಪುರ	00
ಯಲ್ಲಾಪುರ	15
ಮುಂಡಗೋಡ	08
ಹಳಿಯಾಳ	112
ಜೋಯಿಡಾ	12
ಒಟ್ಟು	741

ಶ್ರೀ ಮಂಕಾಳ ಸುಬ್ಬ ವೈದ್ಯ : ಮಾನ್ಯ ಅಧ್ಯಕ್ಷರೆ, ಉತ್ತರವನ್ನು ಒದಗಿಸಿದ್ದಾರೆ. ಒಂದು ಜಿಲ್ಲೆಯಲ್ಲಿ 4,750 ಮಕ್ಕಳು ಒಂದನೇ ತರಗತಿಗೆ ಪ್ರವೇಶ ಪಡೆದಿದ್ದಾರೆ. ಅದರ ಪ್ರಕಾರ ಕೊಡುವುದಾದರೆ 25% ಮಕ್ಕಳಿಗೆ RTE Act ಅಡಿಯಲ್ಲಿ ಕೊಡಬೇಕು. 1.187 ಮಕ್ಕಳಿಗೆ ಕೊಡಬೇಕಾಗಿತ್ತು. ಆ ಜಿಲ್ಲೆಯಲ್ಲಿ 741 ಮಕ್ಕಳಿಗೆ ಕೊಟ್ಟಿದ್ದಾರೆ. 446 ಮಕ್ಕಳಿಗೆ ಆ ಜಿಲ್ಲೆಯಲ್ಲಿ ಅನ್ಯಾಯವಾಗಿದೆ. ಆ ಮಕ್ಕಳಿಗೆ ಒದಗಿಸುವಂತಹ ಕೆಲಸ ಸರ್ಕಾರ ಮಾಡಬೇಕು.

ಶ್ರೀ ಕಿಮ್ಮನೆ ರತ್ನಾಕರ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) : RTE ಕಾಯ್ದೆಯನುಸಾರ ಏನು availability list ಇದೆ ಅವೆಲ್ಲವನ್ನೂ fill up ಮಾಡಿದ್ದೇವೆ. ಇನ್ನೂ ಉಳಿದಿದ್ದರೆ ಅದನ್ನು ಭರ್ತಿ ಮಾಡುತ್ತೇವೆ.

ಅಧ್ಯಕ್ಷರು : ಮಾನ್ಯ ಸದಸ್ಯರು ಎಲ್ಲಿ ಉಳಿದಿದೆ ಎನ್ನುವುದನ್ನು ಹೇಳಿ.

ಶ್ರೀ ಮಂಕಾಳ ಸುಬ್ಬ ವೈದ್ಯ : ನನ್ನ ತಾಲ್ಲೂಕಿನಲ್ಲಿಯೇ ಉಳಿದಿದೆ. ಇವರು ಒಂದು ಹೊಸ ನೀತಿಯನ್ನು ಜಾರಿ ಮಾಡಿದ್ದಾರೆ. ಒಂದು ಶಾಲೆಯಲ್ಲಿ ಒಂದು ತರಗತಿಯಲ್ಲಿ 150 ಮಕ್ಕಳಿದ್ದರೆ. 40 ಮಕ್ಕಳಿಗೆ ಮಾತ್ರ consider ಮಾಡಿ ಕೊಡುತ್ತಿದ್ದಾರೆ. ಅದನ್ನು ಮಾಡಬಾರದು. ಆ ಶಾಲೆಯಲ್ಲಿ ಎಷ್ಟು ಜನ ಮಕ್ಕಳು admission ಆಗಿದ್ದಾರೆ. ಅದರ ಮೇಲೆ 25% ಅನ್ನು ಕೊಡಬೇಕು. ಆ ತಾಲ್ಲೂಕಿನಲ್ಲಿ ಒಳ್ಳೆಯ ಶಾಲೆಗೆ ಎಲ್ಲಾ ಮಕ್ಕಳು ಹೋಗುತ್ತಾರೆ. ಹಾಗಾಗಿ ಆ ತಾಲ್ಲೂಕಿನ ಒಟ್ಟು ಮಕ್ಕಳ ಸಂಖ್ಯೆಗನುಗುಣವಾಗಿ ಯಾವ ಶಾಲೆಗೆ ಹೋಗುತ್ತಾರೆ ಆ ಶಾಲೆಯಲ್ಲಿಯೇ ಸ್ವಲ್ಪ ಜಾಸ್ತಿ ಕೊಡುವಂತಹ ಕೆಲಸ ಸರ್ಕಾರ ಮಾಡಬೇಕು.

ಶ್ರೀ ಕಿಮ್ಮನೆ ರತ್ನಾಕರ್: ನಿಯಮದಡಿಯಲ್ಲಿ ಏನು ಅವಕಾಶವಿದೆ ಅದನ್ನು ಮಾಡಿಕೊಡುತ್ತೇವೆ.

ಶ್ರೀ ಜಿ. ಹೆಚ್. ಶ್ರೀನಿವಾಸ್ (ತರೀಕೆರೆ) :– ಮಾನ್ಯ ಅಧ್ಯಕ್ಷರೆ, ಇದೇ ವಿಚಾರವಾಗಿ ಕೆಲವು ಶಾಲೆಗಳಲ್ಲಿ RTE ವಿದ್ಯಾರ್ಥಿಗಳಿಗೆ Private ಶಿಕ್ಷಣ open ಮಾಡಿದ್ದಾರೆ. ಅವರಿಗೆ ಬೇರೆ Section, ಅವರಿಗೆ ಬೇರೆ ರೀತಿಯಲ್ಲಿ ಪಾಠ ಪ್ರವಚನ ಮಾಡುತ್ತಿದ್ದಾರೆ. ಇದರ ಬಗ್ಗೆ ಪತ್ರಿಕೆಗಳಲ್ಲಿ ಬಂದಿದೆ. ಇದರ ಬಗ್ಗೆ ಮಾನ್ಯ ಸಚಿವರು ಏನು ಕ್ರಮ ಕೈಗೊಂಡಿದ್ದಾರೆ. ಎನ್ನುವುದನ್ನು ತಿಳಿಸಬೇಕು.

ಅಧ್ಯಕ್ಷರು : ಮಾನ್ಯ ಪುಟ್ಟಣ್ಣಯ್ಯನವರು ಮಾತನಾಡುವುದು.

ಪ್ರಾಥಮಿಕ ಮತ್ತು ಪ್ರೌಢಶಾಲೆಗಳು

43(94) ಶ್ರೀ ಪುಟ್ಟಣ್ಣಯ್ಯ ಕೆ.ಎಸ್. (ಮೇಲುಕೋಟೆ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ರಾಜ್ಯದಲ್ಲಿರುವ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸಂಖ್ಯೆ ಎಷ್ಟು ; ಇದುವರೆಗೂ ಮುಚ್ಚಿರುವ ಮತ್ತು ಮುಚ್ಚುವ ಸ್ಥಿತಿಗೆ ತಲುಪಿರುವ ಶಾಲೆಗಳ ಸಂಖ್ಯೆ ಎಷ್ಟು ;

(ಆ) ಸರ್ಕಾರಿ ಶಾಲಾ ಕಟ್ಟಡಗಳ ದುರಸ್ಥಿಗೆ ನಿಗದಿಪಡಿಸಲಾಗಿರುವ ಅನುದಾನ ಎಷ್ಟು; ಶಾಲಾ ಕಟ್ಟಡಗಳ ದುರಸ್ಥಿ ಕಾರ್ಯವನ್ನು ಎಂದಿನಿಂದ ಕೈಗೆತ್ತಿಕೊಳ್ಳಲಾಗುವುದು?

ಶ್ರೀ ಕಿಮ್ಮನೆ ರತ್ನಾಕರ್ (ಪ್ರಾಥಮಿಕ & ಪ್ರೌಢ ಶಿಕ್ಷಣ ಸಚಿವರು) :–

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಶಾಲೆಗಳು–44,615.
ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರೌಢ ಶಾಲೆಗಳು– 4,452.
ವಿಲೀನಗೊಳಿಸಲಾಗಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಶಾಲೆಗಳು–539,
ಮುಚ್ಚುವ ಸ್ಥಿತಿಗೆ ತಲುಪಿರುವ ಶಾಲೆಗಳು–ಯಾವುದೂ ಇಲ್ಲ.

(ಆ) 2014–15 ನೇ ಸಾಲಿನಲ್ಲಿ ಸರ್ವ ಶಿಕ್ಷಣ ಅಭಿಯಾನದಡಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಕಟ್ಟಡಗಳನ್ನು ದುರಸ್ಥಿಗೊಳಿಸಲು ನಿಗದಿಪಡಿಸಲಾದ ಅನುದಾನದ ವಿವರ :

ಶಾಲೆಯ ವಿವರ	ಸಂಖ್ಯೆ	ಅನುದಾನ
ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು	180	ರೂ.231.79 ಲಕ್ಷಗಳು
ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು	300	ರೂ.664.82 ಲಕ್ಷಗಳು

ಈಗಾಗಲೇ ರಾಜ್ಯದ ಎಲ್ಲಾ ಡಿ.ವೈ.ಎಸ್.ಪಿ ಗಳ ಸಭೆ ಕರೆಯಲಾಗಿದ್ದು ಆಯಾ ಜಿಲ್ಲೆಗಳಿಗೆ ಬಿಡುಗಡೆ ಆಗಿರುವ ಕಾಮಗಾರಿಗಳು ಮತ್ತು ಅನುದಾನದ ವಿವರಗಳನ್ನು ನೀಡಲಾಗಿದ್ದು, ಕೂಡಲೇ ಸದರಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅಂದಾಜು ಪಟ್ಟಿಗಳನ್ನು ಸಿದ್ಧಪಡಿಸಿಕೊಂಡು ಅನುಷ್ಠಾನಗೊಳಿಸಲು ಸೂಚಿಸಲಾಗಿದೆ.

ಶ್ರೀ ಕೆ.ಎಸ್. ಪುಟ್ಟಣ್ಣಯ್ಯ: ಮಾನ್ಯ ಅಧ್ಯಕ್ಷರೆ, ಮಾನ್ಯ ಸಚಿವರು ಉತ್ತರವನ್ನು ಒದಗಿಸಿದ್ದಾರೆ. ಎಷ್ಟು ಶಾಲೆಗಳನ್ನು ಮುಚ್ಚಲಾಗಿದೆ ಎಂದು ಪ್ರಶ್ನೆಯನ್ನು ಕೇಳಲಾಗಿದೆ